ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ

ಹನ್ನೆರಡನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಮಂಗಳವಾರ, ದಿನಾಂಕ 29ನೇ ನವೆಂಬರ್, 2016

(ಸಮಯ ಬೆಳಗ್ಗೆ : 11.00 ಗಂಟೆ)

-----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಏಳನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಏಳನೇ ಪಟ್ಟಿ

2. ವಿತ್ತೀಯ ಕಾರ್ಯಕಲಾಪಗಳು

ಶ್ರೀ ಸಿದ್ದರಾಮಯ್ಯ (ಮುಖ್ಯಮಂತ್ರಿ) ಅವರು :-

(1) 2016-17ನೇ ಸಾಲಿನ ರಾಜ್ಯ ಹಣಕಾಸಿನ ಮಧ್ಯವಾರ್ಷಿಕ ಪರಿಶೀಲನಾ ವರದಿಯನ್ನು ಮಂಡಿಸುವುದು.

(2) 2016-17ನೇ ಸಾಲಿನ ಪೂರಕ ಅಂದಾಜುಗಳನ್ನು (2ನೇ ಕಂತು) ಮಂಡಿಸುವುದು.

3. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಸದಸ್ಯರಿಗೆ ಪ್ರತ್ಯೇಕವಾಗಿ ಕಳುಹಿಸಲಾಗಿರುವ ಮೂರನೇ ಪಟ್ಟಿಯ ರೀತ್ಯಾ.

4. ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಮತ್ತು ನಡವಳಿಕೆಯ ನಿಯಮಗಳಿಗೆ ತಿದ್ದುಪಡಿಗಳು.

ಶ್ರೀ ಟಿ.ಬಿ. ಜಯಚಂದ್ರ (ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು) ಅವರು:-

ಅ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಮತ್ತು ನಡವಳಿಕೆಗಳ ನಿಯಮಾವಳಿಗಳ ತಿದ್ದುಪಡಿಗಳನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.

ಆ) ಹಾಗೂ ತಿದ್ದುಪಡಿಗಳನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

5. ಮಹದಾಯಿ ಕಳಸಾ ಬಂಡೂರಿ ನಾಲಾ ಯೋಜನೆ ಕುರಿತು ಮುಂದುವರೆದ ವಿಶೇಷ ಚರ್ಚೆ ಹಾಗೂ ಸರ್ಕಾರದ ಉತ್ತರ

.....2

6. ಶಾಸನ ರಚನೆ

I. ವಿಧೇಯಕವನ್ನು ಮಂಡಿಸುವುದು

ಶ್ರೀ ಕೆ.ಆರ್. ರಮೇಶ್ ಕುಮಾರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)ಅವರು:-

ಅ) 2016ನೇ ಸಾಲಿನ ಕರ್ನಾಟಕ ಜೀವರಕ್ಷಕ ಮತ್ತು ವೈದ್ಯಕೀಯ ವೃತ್ತಿನಿರತರ (ತುರ್ತು ಸನ್ನಿವೇಶಗಳಲ್ಲಿ ರಕ್ಷಣೆ ಮತ್ತು ನಿಯಂತ್ರಣ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು.

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

II. ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

1. **ಶ್ರೀ ಕೆ.ಆರ್. ರಮೇಶ್ ಕುಮಾರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)ಅವರು:-**

   ಅ) 2016ನೇ ಸಾಲಿನ ಕರ್ನಾಟಕ ಆಯುರ್ವೇದ, ಪ್ರಕೃತಿ ಚಿಕಿತ್ಸೆ, ಸಿದ್ಧ, ಯುನಾನಿ ಮತ್ತು ಯೋಗ ವೈದ್ಯ ವೃತ್ತಿ ನಿರತರ ನೋಂದಣಿ ಮತ್ತು ವೈದ್ಯಕೀಯ ವೃತ್ತಿನಿರತರ ಸಂಕೀರ್ಣ ಉಪಬಂಧಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.

   ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2. **ಶ್ರೀ ಬಸವರಾಜ ರಾಯರೆಡ್ಡಿ (ಉನ್ನತ ಶಿಕ್ಷಣ ಸಚಿವರು) ಅವರು:-**

   ಅ) 2016ನೇ ಸಾಲಿನ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.

   ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

3. **ಶ್ರೀ ಟಿ.ಬಿ. ಜಯಚಂದ್ರ (ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಸಣ್ಣ ನೀರಾವರಿ ಸಚಿವರು) ಅವರು:-**

   ಅ) 2016ನೇ ಸಾಲಿನ ಕರ್ನಾಟಕ ಕೆಲವು ಸ್ಥಳಗಳ ಹೆಸರುಗಳನ್ನು ಬದಲಾಯಿಸುವ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.

   ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

4. **ಶ್ರೀ ಕೆ.ಜೆ. ಜಾರ್ಜ್ (ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು)ಅವರು:-**

   ಅ) 2016ನೇ ಸಾಲಿನ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.

   ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

5. **ಶ್ರೀ ಬಿ. ರಮಾನಾಥ ರೈ (ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು) ಅವರು:-**

   ಅ) 2016ನೇ ಸಾಲಿನ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಅರಣ್ಯ ಅಧಿಕಾರಿಗಳು ಮತ್ತು ಇತರ ಸಿಬ್ಬಂದಿಯ ವರ್ಗಾವಣೆ ಹಾಗೂ ಸ್ಥಳನಿಯುಕ್ತಿಗಳ ನಿಯಂತ್ರಣ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.

   ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

. . . .3

7. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

ಶ್ರೀ ಜಗದೀಶ್ ಶೆಟ್ಟರ್, ಶ್ರೀ ಆರ್. ಅಶೋಕ್, ಶ್ರೀ ಗೋವಿಂದ ಎಂ. ಕಾರಜೋಳ, ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ, ಶ್ರೀ ಎಸ್. ಸುರೇಶ್ ಕುಮಾರ್ ಮತ್ತು ಇತರರು ಹೈದರಾಬಾದ್ – ಕರ್ನಾಟಕ ಸಮಗ್ರ ಅಭಿವೃದ್ಧಿಗಾಗಿ ಭಾರತ ಸಂವಿಧಾನದ ಅನುಚ್ಛೇದ 371 (ಜೆ)ಗೆ ತಿದ್ದುಪಡಿ ತಂದು ವಿಶೇಷ ಸ್ಥಾನಮಾನ ನೀಡಿದ್ದರೂ ಸಹ, ಅಲ್ಲಿನ ಜನರಿಗೆ ಅಗತ್ಯ ಸೌಲಭ್ಯ ಸಿಗದಿರುವ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

8. ಗಮನ ಸೆಳೆಯುವ ಸೂಚನೆಗಳು

1. **ಶ್ರೀ ಹೆಚ್.ಡಿ. ರೇವಣ್ಣ ಅವರು** – ಹಾಸನ ಜಿಲ್ಲೆ, ಶಾಂತಿ ಗ್ರಾಮ ಹೋಬಳಿ, ಮುತ್ತಿಗೆ ಗ್ರಾಮದ ಅಂಗನವಾಡಿ ಕಾರ್ಯಕರ್ತೆಯರ ಹುದ್ದೆಯ ನೇಮಕಾತಿಯಲ್ಲಿ ನಡೆದಿರುವ ಅವ್ಯವಹಾರದಿಂದಾಗಿ ತೊಂದರೆಯುಂಟಾಗಿರುವ ಬಗ್ಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

2. **ಶ್ರೀ ಮಾನಪ್ಪ ಡಿ. ವಜ್ಜಲ್ ಅವರು** – ಲಿಂಗಸಗೂರು ಪಟ್ಟಣದಲ್ಲಿ ರಸ್ತೆ ಸಾರಿಗೆ ಸಂಸ್ಥೆಯ ವಿಭಾಗೀಯ ಕಛೇರಿಯನ್ನು ಪ್ರಾರಂಭಿಸುವ ಬಗ್ಗೆ ಮಾನ್ಯ ಸಾರಿಗೆ ಸಚಿವರ ಗಮನ ಸೆಳೆಯುವುದು.

3. **ಶ್ರೀ ವಿ. ಸುನೀಲ್ ಕುಮಾರ್ ಅವರು** – ಕಾರ್ಕಳ ತಾಲ್ಲೂಕಿನ ನಿಟ್ಟೆ ಮತ್ತು ಹೆಬ್ರಿ ಗ್ರಾಮಗಳಲ್ಲಿ ಬಹು ಗ್ರಾಮ ಕುಡಿಯುವ ನೀರಿನ 2ನೇ ಹಂತದ ಕಾಮಗಾರಿಯು ಅಪೂರ್ಣಗೊಂಡಿರುವುದರಿಂದ ತೊಂದರೆಯುಂಟಾಗಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

4. **ಶ್ರೀ ಹೆಚ್.ಎಸ್. ಪ್ರಕಾಶ್ ಅವರು** – ಹಾಸನ ಜಿಲ್ಲೆಯಲ್ಲಿ 7 ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶವೆಂದು ಘೋಷಣೆ ಮಾಡಿದ್ದರೂ ಇದುವರೆವಿಗೂ ಅನುದಾನ ಬಿಡುಗಡೆ ಮಾಡದಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

. . . .4

5. **ಶ್ರೀ ಎಂ.ಟಿ. ಕೃಷ್ಣಪ್ಪ ಅವರು** – ತುರುವೇಕೆರೆ ತಾಲ್ಲೂಕು ಅಲ್ಪಸಂಖ್ಯಾತರ ಹಾಸ್ಟೆಲ್ ಕಟ್ಟಡ ನಿರ್ಮಾಣ ಕಾಮಗಾರಿ ಪೂರ್ಣಗೊಳ್ಳದಿರುವುದರಿಂದ ವಿದ್ಯಾರ್ಥಿಗಳಿಗೆ ತೊಂದರೆಯುಂಟಾಗಿರುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

6. **ಶ್ರೀ ಎಂ. ರಾಜಣ್ಣ ಅವರು** – ಚಿಕ್ಕಬಳ್ಳಾಪುರ ಜಿಲ್ಲೆಯ ಶಿಡ್ಲಘಟ್ಟ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಕೃಷಿ ಮಾರುಕಟ್ಟೆ ಸಮಿತಿಯ ಚುನಾವಣೆಯ ಸಂದರ್ಭದಲ್ಲಿ ಅಕ್ರಮವೆಸಗಿದ ಅಧಿಕಾರಿಯ ವಿರುದ್ಧ ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

7. **ಶ್ರೀ ಅರಬೈಲ್ ಶಿವರಾಮ್ ಹೆಬ್ಬಾರ್ ಅವರು** – ಉತ್ತರ ಕನ್ನಡ ಜಿಲ್ಲೆಯಲ್ಲಿ ಹಂಗಾಮಿ ಲಾಗಣಿ ಜಮೀನನ್ನು ರೈತರ ಹೆಸರಿಗೆ ಖಾತೆ ಮಾಡಿ ಆರ್.ಟಿ.ಸಿ. ನೀಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

8. **ಶ್ರೀ ವೈ.ಎ. ನಾರಾಯಣ ಸ್ವಾಮಿ ಅವರು** – ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಹೆಬ್ಬಾಳ ವಿಧಾನಸಭಾ ಕ್ಷೇತ್ರದಲ್ಲಿ ಕುಡಿಯುವ ನೀರಿಗೆ ಶಾಸಕರ ಪ್ರದೇಶಾಭಿವೃದ್ಧಿ ಯೋಜನೆ ಅನುದಾನದಡಿಯಲ್ಲಿ ಕೊಳವೆ ಬಾವಿಗಳನ್ನು ಕೊರೆಯಲು ಅವಕಾಶ ನೀಡುವ ಬಗ್ಗೆ ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರ ಗಮನ ಸೆಳೆಯುವುದು.

9. **ಶ್ರೀ ಬಿ.ಆರ್. ಪಾಟೀಲ್ ಅವರು** – ಬೆಂಗಳೂರಿನ ಇಂದಿರಾ ನಗರದಲ್ಲಿರುವ ಹಂಸಧ್ವನಿ ಕಿವುಡ ಮತ್ತು ಮೂಕ ಮಕ್ಕಳ ಶಾಲೆಯ ಶಿಕ್ಷಕರುಗಳಿಗೆ ಬಾಕಿ ಇರುವ ವೇತನ ಭತ್ಯೆ ಹಾಗೂ ನಿವೃತ್ತಿ ಹೊಂದಿರುವ ಶಿಕ್ಷಕರುಗಳಿಗೆ ಪಿಂಚಣಿ ನೀಡುವ ಬಗ್ಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

ಎಸ್.ಮೂರ್ತಿ
ಕಾರ್ಯದರ್ಶಿ (I/C)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm